# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 04-12-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಶ್ರೀ ಇಂದಿರಾ ಅರುಣ್, ರಿವೋಬ್ ಅಸೋಸಿಯೇಷನ್,
3. ಶ್ರೀ/ಶ್ರೀಮತಿ ರೋಸಿತಾ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್
4. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,
5. ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

- ವಾರ್ಡ್ ವ್ಯಾಪ್ತಿಯ ಬಾಣಸವಾಡಿ ಬ್ರಿಡ್ಜ್ (ಐ.ಓ.ಸಿ) ಮೇಲೆ ಹಾಗೂ ಹಚ್ಚಿನ್ಸ್ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳು ಇಲ್ಲದೇ ಇರುವುದರಿಂದ / ಸರಿಯಾಗಿ ಉರಿಯದೇ ಇರುವುದರಿಂದ ರಾತ್ರಿ ಸಮಯದಲ್ಲಿ ಪಾದಾಚಾರಿಗಳಿಗೆ ತೊಂದರೆಯಾಗುತ್ತಿದ್ದು ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸದರಿ ಪ್ರದೇಶದಲ್ಲಿ ಕೂಡಲೇ ಬೀದಿ ದೀಪಗಳನ್ನು ಅಳವಡಿಸಲು ಕ್ರಮ ವಹಿಸಲು ತಿಳಿಸಿದರು.

- ಹಚ್ಚಿನ್ಸ್ ಮುಖ್ಯರಸ್ತೆಯಲ್ಲಿ ಎಲ್ಲಂದರಲ್ಲಿ ಕಸ ಹಾಗೂ ಇತರೆ ತ್ಯಾಜ್ಯವನ್ನು ಎಸೆಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೆಲವು ಪ್ರದೇಶಗಳಲ್ಲಿ ಬ್ಲಾಕ್ ಸ್ಪಾಟ್‌ಗಳಾಗಿ ಮಾರ್ಪಟ್ಟಿದ್ದು, ಇದನ್ನು ಕೂಡಲೇ ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕಕ್ಷಕರಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸಿದರು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆ ಹಾಗೂ ಇತರೆ ಅವಶ್ಯಕ ಇರುವ ಪ್ರದೇಶಗಳಲ್ಲಿ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಕಾಮಗಾರಿ ಇಲಾಖೆಯಿಂದ ವಾರ್ಡ್ ವ್ಯಾಪ್ತಿಯಲ್ಲಿ ಅವಶ್ಯವಿರುವ ಪ್ರದೇಶದಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಸೂಚಿಸಿದರು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಜೂಡ್ ಶಾಲೆಯ ಹತ್ತಿರ ಸದರಿ ಪ್ರದೇಶದ ಸುತ್ತಮುತ್ತ ವಾಸಿಸುತ್ತಿರುವ ನಾಗರೀಕರು ಕಸವನ್ನು ಎಸೆದು ಬ್ಲಾಕ್‌ಸ್ಪಾಟ್ ನಿರ್ಮಾಣ ಮಾಡಿದ್ದು, ಇದರಿಂದ ದುರ್ವಾಸನೆ ಹೆಚ್ಚಾಗುತ್ತಿದ್ದು, ಸದರಿ ಸ್ಥಳದಲ್ಲಿ ಕಸವನ್ನು ಎಸೆಯುವವರನ್ನು ಗುರುತಿಸಿ, ಸೂಕ್ತ ವಿಧಿಸಲು ಕ್ರಮ ವಹಿಸಲು ಹಾಗೂ ಸದರಿ ಪ್ರದೇಶದಲ್ಲಿ ನಿರ್ಮಾಣವಾಗಿರುವ ಬ್ಲಾಕ್‌ಸ್ಪಾಟ್‌ನ್ನು ತೆರವುಗೊಳಿಸಿ, ನಾಗರೀಕರಿಗೆ ಅನುಕೂಲ ಮಾಡಿಕೊಡಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರಿಗೆ ತಿಳಿಸಿದರು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಬೋರ್‌ವೆಲ್‌ಗಳ ನಿರ್ವಹಣೆ ಮಾಡದೇ ಇರುವುದು ಕಂಡು ಬಂದಿದ್ದು, ಕೂಡಲೇ ವಾರ್ಡ್ ವ್ಯಾಪ್ತಿಯಲ್ಲಿರುವ ಕೊಳವೆ ಭಾವಿಗಳ ನಿರ್ವಹಣೆ ಮಾಡಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಕ್ರಮ ವಹಿಸಲು ತಿಳಿಸಿದರು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಅಡ್ಡರಸ್ತೆ ಹಾಗೂ ಮುಖ್ಯರಸ್ತೆಗಳಲ್ಲಿ ರಸ್ತೆ ಗುಂಡಿಗಳು ಬಿದ್ದಿದ್ದು, ಇದರಿಂದ ವಾಹನ ಸವಾರರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಕೂಡಲೇ ಅಂತಹ ರಸ್ತೆಗಳನ್ನು ಗುರುತಿಸಿ, ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮ ವಹಿಸಲು ಸೂಚಿಸಿದರು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಅನೇಕ ಕಡೆಗಳಲ್ಲಿ ಬಿಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಅಳವಡಿಸಿರುವ ಸಬ್‌ಲೈನ್ ತುಂಬಿ ಹೋಗಿ, ನೀರು ಸರಾಗವಾಗಿ ಹರಿಯದೇ ರಸ್ತೆಗೆ ಬರುತ್ತಿರುವುದು ಕಂಡುಬಂದಿದ್ದು, ಈ ಬಗ್ಗೆ ಕ್ರಮ ವಹಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸಿದರು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಸತ್ಯಾನಗರ ಮತ್ತು ನಾಗಯ್ಯನ ಪಾಳ್ಯ ಪ್ರದೇಶದಲ್ಲಿ ಪುಂಡ ಪೋಕಿರಿಗಳು ಹಾಗೂ ಕಳ್ಳರ ಹಾವಳಿ ಹೆಚ್ಚಾಗುತ್ತಿದ್ದು, ರಾತ್ರಿ ಸಮಯದಲ್ಲಿ ಕೆಲಸ ಕಾರ್ಯಗಳಿಗೆ ತೆರಳುವ ಸಾರ್ವಜನಿಕರಿಗೆ ತೊಂದರೆ ಕೊಡುತ್ತಿರುವುದು ಇತ್ತೀಚೆಗೆ ಹೆಚ್ಚಾಗಿದ್ದು, ಸದರಿ ಪ್ರದೇಶಗಳಲ್ಲಿ ರಾತ್ರಿ ಸಮಯದಲ್ಲಿ ಪೊಲೀಸ್ ಗಸ್ತನ್ನು ಹೆಚ್ಚಿಸಿ, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಪೊಲೀಸ್ ಇಲಾಖೆಗೆ ಈ ಬಗ್ಗೆ ಮಾಹಿತಿ ನೀಡಿ, ರಾತ್ರಿ ಸಮಯದಲ್ಲಿ ಪೊಲೀಸ್ ಗಸ್ತನ್ನು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸಭೆಗೆ ತಿಳಿಸಿದರು.

- ಮಾನ್ಯ ಅಧ್ಯಕ್ಷರು ಮಾತನಾಡಿ, ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಜೀವನಹಳ್ಳಿ ತೆಲುಗು ಶಾಲೆಯಲ್ಲಿ ಲಸಿಕಾ ಅಭಿಯಾನವನ್ನು ದಿನಾಂಕ: 04-12-2021 ರಂದು ಮದ್ಯಾಹ್ನ 4-30 ಗಂಟೆಯವರೆಗೆ ನಡೆಸಲು ಉದ್ದೇಶಿಸಿದ್ದು, ಈ ದಿನ ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

04/12/2024

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.